**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ**

**ಸಿ.ಸಿ. ಸಂಖ್ಯೆ: 755/2025**

ಫ್ರಾಸಾ – 3

ಚಾಸಾ – 3

**ಸಾಕ್ಷಿಯು ದಿಃ 12.12.2025 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

| | | |
|---|---|---|
| ಹೆಸರು | : | ಪಾಪಯ್ಯ |
| ತಂದೆಯ ಹೆಸರು | : | ಪಿಣ್ಣಯ್ಯ |
| ವಯಸ್ಸು | : | 55 ವರ್ಷ |
| ವೃತ್ತಿ | : | ಕೂಲಿ |
| ವಾಸಸ್ಥಳ | : | ದೊಡ್ಡತುಪ್ಪೂರು |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :–**

ಚಾಸಾ 1, 2 ಮತ್ತು 4 ನನಗೆ ಗೊತ್ತಿಲ್ಲ. ಸಾಕ್ಷಿಯು ಸ್ಥಳ ಪಂಚನಾಮೆಯಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದರಿಂದ, ಸ್ಥಳ ಪಂಚನಾಮೆಯನ್ನು ನಿಪಿ 2 ಎಂದು, ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರ್ತಿಸಲಾಯಿತು. ಸದರಿ ಸಹಿಯನ್ನು ಸುಮಾರು 4 ವರ್ಷಗಳ ಹಿಂದೆ ಗುಂಡ್ಲುಪೇಟೆ ಪೊಲೀಸ್ ಠಾಣೆಗೆ ಹೋದಾಗ ಮಾಡಿದ್ದೇನೆ. ನಿಪಿ 2 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಮತ್ತು ಯಾವುದೇ ವಸ್ತುವನ್ನು ವಶಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)

**ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-**

ದಿಃ 04.11.2021 ರಂದು ಚಾಸಾ 4 ತೋರಿಸಿದ ಸ್ಥಳದಲ್ಲಿ ಚಾಸಾ 2ಮತ್ತು ನನ್ನ ಸಮಕ್ಷಮ ಪೊಲೀಸರು ನಿಪಿ 2 ರಂತೆ ಪಂಚನಾಮೆ ಜರುಗಿಸಿ ಸ್ಥಳದಲ್ಲಿ ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲು 1 ದೋಣ್ಣೆಯನ್ನು ಅಮಾನತ್ತು ಪಡಿಸಿಕೊಂಡು ನಮ್ಮ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ 2 ರ ವಿಚಾರಗಳು ಗೊತ್ತಿದ್ದರು ಸಹ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ